# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 876
2. ಸದಸ್ಯರ ಹೆಸರು : ಶ್ರೀ ಅ.ದೇವೇಗೌಡ
3. ಉತ್ತರಿಸಬೇಕಾದ ದಿನಾಂಕ : 18-12-2018
4. ಉತ್ತರಿಸುವ ಸಚಿವರು : ಮಾನ್ಯ ಜಲ ಸಂಪನ್ಮೂಲ ಸಚಿವರು

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಹೇಮಾವತಿ ನೀರನ್ನು ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕಿಗೆ ಹರಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಹೇಮಾವತಿ ಯೋಜನೆಯ ತುಮಕೂರು ಶಾಖಾ ನಾಲೆಯಿಂದ ನೀರನ್ನು ಎತ್ತಿ ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಹಾಗೂ ಕುಣಿಗಲ್ ತಾಲ್ಲೂಕಿನ ಹುತ್ತರಿದುರ್ಗ ಹೋಬಳಿಯ ಒಟ್ಟು 83 ಕೆರೆಗಳಿಗೆ ಕುಡಿಯುವ ನೀರಿಗಾಗಿ ನೀರನ್ನು ಹರಿಸುವ ರೂ.277.50 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ದಿನಾಂಕ:28-02-2014 ರಂದು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಸದರಿ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ದಿನಾಂಕ:23-12-2015 ರಂದು ಗುತ್ತಿಗೆದಾರರಿಗೆ ವಹಿಸಿಕೊಡಲಾಗಿದೆ. |
| ಆ | ಇದಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಹಣವೆಷ್ಟು; | ಸದರಿ ಕಾಮಗಾರಿಗೆ ಇಲ್ಲಿಯವರೆಗೆ ರೂ.155.92 ಕೋಟಿ ಬಿಡುಗಡೆಯಾಗಿರುತ್ತದೆ ಹಾಗೂ 2018-19ನೇ ಸಾಲಿಗೆ ರೂ.15.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ. |
| ಇ | ಈ ಯೋಜನೆ ಯಾವ ಹಂತದಲ್ಲಿದೆ? | ಯೋಜನೆಯ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಪಂಪಹೌಸ್ ನಿರ್ಮಾಣ ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿದೆ. ಮೋಟಾರ್ ಹಾಗೂ ಪಂಪ್‌ಗಳನ್ನು ಅಳವಡಿಸಲಾಗಿದೆ. Substation civil ಕಾಮಗಾರಿ ಹಾಗೂ Rising main ಕಾಮಗಾರಿ ಪ್ರಗತಿಯಲ್ಲಿದೆ. |

***ಸಂಖ್ಯೆ:ಜಸಂಇ 69 ಎನ್‌ಎಲ್‌ಎ 2018***

(ಡಿ.ಕೆ.ಶಿವಕುಮಾರ್)
**ಜಲ ಸಂಪನ್ಮೂಲ ಸಚಿವರು**